# ದಿನಾಂಕ: 30-08-2010ರಂದು ಪೂರ್ವಾಹ್ನ: 11-00ಗಂಟೆಗೆ ಹೇಮಾವತಿ ಸಭಾಂಗಣ, ಜಿಲ್ಲಾ ಪಂಚಾಯಿತಿ, ಹಾಸನ ಇಲ್ಲಿ ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳು

## ಅಧ್ಯಕ್ಷತೆ: ಶ್ರೀ ಹೆಚ್.ವೈ ಚಂದ್ರಶೇಖರ್

## ಅಧ್ಯಕ್ಷರು,

## ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ

ಹಾಜರಿ: 07

ಗೈರು ಹಾಜರಿ: 00

| ಕ್ರಸಂ | ವಿಷಯ | ಚರ್ಚೆ | ತೀರ್ಮಾನ |
|---|---|---|---|
| | | ಉಪಕಾರ್ಯದರ್ಶಿ(ಆಡಳಿತ) ಇವರು ಸಭೆಗೆ ಹಾಜರಿದ್ದ ಮಾನ್ಯ ಸಮಿತಿ ಅಧ್ಯಕ್ಷರು, ಸದಸ್ಯರು, ಮುಖ್ಯ ಲೆಕ್ಕಾಧಿಕಾರಿ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಯವರನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆಯನ್ನು ವಹಿಸಿ ಸಭೆಯನ್ನು ನಡೆಸಿಕೊಡಬೇಕೆಂದು ಮಾನ್ಯ ಸಮಿತಿ ಅಧ್ಯಕ್ಷರನ್ನು ಕೋರಿದರು. | |
| 1 | ಸಮಾಜ ಕಲ್ಯಾಣ ಇಲಾಖಾ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಕುರಿತು. | ಟಿಪ್ಪಣಿ ಸಂಖ್ಯೆ: ಜಿಸಕಅ/ ಡಿ2/ವಿ.ಪ್ರಾ.ಸು/ ಸಿ.ಆರ್ 40/2010-11 ದಿನಾಂಕ: 28-08-2010ನ್ನು ಸಭೆಯಲ್ಲಿ ಮಂಡಿಸಲಾಯಿತು.<br>2010-11ನೇ ಸಾಲಿಗೆ ಲೆಕ್ಕಶೀರ್ಷಿಕೆ 2225-01-277-0-61ರಲ್ಲಿ ವಿದ್ಯಾರ್ಥಿ ನಿಲಯಗಳ ಪ್ರಾರಂಭ ಮತ್ತು ಸುಧಾರಣಾ ಯೋಜನೆಯಡಿಯಲ್ಲಿ ರೂ.25.00ಲಕ್ಷಗಳನ್ನು ಲಿಂಕ್ ಪುಸ್ತಕದಲ್ಲಿ ನಿಗದಿಗೊಳಿಸಿದ್ದು, ಆಯಾ ತಾಲ್ಲೂಕಿನಲ್ಲಿರುವ ಇಲಾಖಾ ವಿದ್ಯಾರ್ಥಿ ನಿಲಯಗಳಿಗೆ ಉಪಯುಕ್ತ ಸೋಲಾರ್ ವಾಟರ್ ಹೀಟರ್, ಸೋಲಾರ್ ಲೈಟ್ ಗಳನ್ನು ಡಿ.ಜಿ.ಎಸ್ ಮತ್ತು ಡಿ ದರದಲ್ಲಿ ಹಾಗೂ ರೈಸ್ ಮತ್ತು ಸಾಂಬಾರ್ ಸ್ಟೀಮ್ ಕುಕ್ಕರ್ ಉಪಕರಣಗಳನ್ನು ಅಳವಡಿಸುವುದಕ್ಕಾಗಿ ಈ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಬೇಕಾಗಿದ್ದು, ಅನುಮೋದನೆ ನೀಡುವಂತೆ ಕೋರಿ ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. | ಸಭೆಯಲ್ಲಿ ಕ್ರಿಯಾ ಯೋಜನೆಗಳಿಗೆ ಅನು ಮೋದನೆ ನೀಡುವ ವಿಷಯದ ಬಗ್ಗೆ ಸಮಗ್ರವಾಗಿ ಪರಿಶೀಲಿಸ ಲಾಯಿತು.<br>ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ, ಹಾಸನ ಇವರು ಕೋರಿರುವಂತೆ, 2010-11ನೇ ಸಾಲಿಗೆ ಲೆಕ್ಕಶೀರ್ಷಿಕೆ 2225-01-277-0-61ರಲ್ಲಿ ವಿದ್ಯಾರ್ಥಿನಿಲಯಗಳ ಪ್ರಾರಂಭ ಮತ್ತು ಸುಧಾರಣಾ ಯೋಜನೆ ಅಡಿಯಲ್ಲಿ ನಿಗಧಿಪಡಿಸಿರುವ ರೂ.25.00ಲಕ್ಷಗಳಲ್ಲಿ |

| | | | |
|---|---|---|---|
| | | ಮಾನ್ಯ ಸಮಿತಿ ಸದಸ್ಯರುಗಳು ಉತ್ತಮ ಸಂಸ್ಥೆಯವರಿಂದ, ಸೋಲಾರ್ ವಾಟರ್ ಹೀಟರ್ ಮತ್ತು ಸೋಲಾರ್ ಲೈಟ್ ಗಳನ್ನು ವಿದ್ಯಾರ್ಥಿನಿಲಯಗಳಿಗೆ ಅಳವಡಿಸಲು ಕ್ರಮ ವಹಿಸಬೇಕೆಂದು ಕೋರಿದರು.<br>ಉಪ ಕಾರ್ಯದರ್ಶಿ (ಆಡಳಿತ)ರವರು ಮಾತನಾಡುತ್ತಾ, ಡಿ.ಜಿ.ಎಸ್. ಮತ್ತು ಡಿ ದರಗುತ್ತಿಗೆಯನ್ನು ಹೊಂದಿರುವ ವಿವಿಧ ಸಂಸ್ಥೆಯವರೊಂದಿಗೆ ಸಮಾಲೋಚಿಸಿ ಕಡಿಮೆ ದರದಲ್ಲಿ ಉತ್ತಮ ಗುಣಮಟ್ಟದ ಸೋಲಾರ್ ವಾಟರ್ ಹೀಟರ್ ಮತ್ತು ಸೋಲಾರ್ ಲೈಟ್ ಗಳನ್ನು ಸರಬರಾಜು ಮಾಡುವ ಸಂಸ್ಥೆಯವರಿಂದ ಖರೀದಿಸುವುದು ಸೂಕ್ತವಾಗಿರುತ್ತದೆ. ಆದ್ದರಿಂದ, ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರು ಡಿ.ಜಿ.ಎಸ್ ಮತ್ತು ಡಿ ದರಗುತ್ತಿಗೆಯನ್ನು ಹೊಂದಿರುವ ಸಂಸ್ಥೆಯವರನ್ನು ಚರ್ಚೆಗೆ ಆಹ್ವಾನಿಸಬೇಕೆಂದು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಪರ್ವತಯ್ಯರವರು ಮಾತನಾಡುತ್ತಾ, ಸಮಿತಿ ಅಧ್ಯಕ್ಷರು ಮತ್ತು ಸದಸ್ಯರೊಂದಿಗೆ ಚರ್ಚಿಸಿ ವಿದ್ಯಾರ್ಥಿನಿಲಯಗಳಿಗೆ ಸೋಲಾರ್ ವಾಟರ್ ಹೀಟರ್ ಮತ್ತು ಸೋಲಾರ್ ಲೈಟ್ ಗಳನ್ನು ಖರೀದಿಸುವ ಪ್ರಕ್ರಿಯೆಯನ್ನು ಅಂತಿಮಗೊಳಿಸಲು ಕ್ರಮ ವಹಿಸಬೇಕೆಂದು ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರಿಗೆ ತಿಳಿಸಿದರು. | ಸಮಾಜ ಕಲ್ಯಾಣ ಇಲಾಖೆಯ 14 ವಿದ್ಯಾರ್ಥಿನಿಲಯಗಳಿಗೆ ಸೋಲಾರ್ ವಾಟರ್ ಹೀಟರ್ ಮತ್ತು ಸೋಲಾರ್ ಲೈಟ್ ಗಳನ್ನು ಕಡಿಮೆ ದರ ಸೂಚಿಸುವ ಸಂಸ್ಥೆಯವರಿಂದ ಡಿ.ಜಿ.ಎಸ್. ಮತ್ತು ಡಿ ದರಗುತ್ತಿಗೆ ಆಧಾರದಲ್ಲಿ ಖರೀದಿಸಲು ಮತ್ತು ರೈಸ್ ಹಾಗೂ ಸಾಂಬಾರ್ ಸ್ಟೀಮ್ ಕುಕ್ಕರ್ ಗಳನ್ನು ನಿಯಮಾನುಸಾರ ಖರೀದಿಸಲು ಸಭೆಯು ಸರ್ವಾನುಮತದಿಂದ ಅನುಮೋದನೆ ನೀಡಿತು. |
| 2 | | ಮಾನ್ಯ ಸಮಿತಿ ಅಧ್ಯಕ್ಷರು ಮಾತನಾಡುತ್ತಾ, ವಿದ್ಯಾರ್ಥಿನಿಲಯಗಳಲ್ಲಿ ಮೂಲಭೂತ ಸೌಕರ್ಯಗಳು ಇಲ್ಲವೆಂದು ರೈತ ಸಂಘದವರು ವಿದ್ಯಾರ್ಥಿನಿಲಯಗಳಿಗೆ ಭೇಟಿ ನೀಡಿ ಪತ್ರಿಕೆಗಳಲ್ಲಿ ಹೇಳಿಕೆಗಳನ್ನು ನೀಡಿರುತ್ತಾರೆ. ಆದ್ದರಿಂದ, ವಿದ್ಯಾರ್ಥಿನಿಲಯಗಳಿಗೆ ಅವಶ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಕ್ರಮ ವಹಿಸಬೇಕೆಂದು ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರಿಗೆ ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಪರ್ವತಯ್ಯರವರು ಮಾತನಾಡುತ್ತಾ, ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಲ್ಲಿ ಈಗ ಮದ್ಯಾಹ್ನದ ಊಟವನ್ನು ನೀಡುತ್ತಿಲ್ಲ. ಅದರ ಬದಲಿಗೆ ಸಂಜೆ ವೇಳೆಯಲ್ಲಿ ಕಾಫಿ ಮತ್ತು ತಿಂಡಿಯನ್ನು ನೀಡಲಾಗುತ್ತಿದೆ. ಆದರೆ, ಉತ್ತಮ ಗುಣಮಟ್ಟದ ತಿಂಡಿಯನ್ನು ನೀಡುತ್ತಿಲ್ಲ. ಆದ್ದರಿಂದ, ಈ ಬಗ್ಗೆ ವಾರ್ಡನ್ ಗಳಿಗೆ ಉತ್ತಮ ಗುಣಮಟ್ಟದ ತಿಂಡಿಯನ್ನು ನೀಡಲು ನಿರ್ದೇಶನ ನೀಡಬೇಕೆಂದು ಕೋರಿದರು ಮತ್ತು ಊಟದ ಚಾರ್ಟ್ ಗಳನ್ನು ಮೇಲ್ವಿಚಾರಕರ ಕೊಠಡಿಯಲ್ಲಿ ಹಾಕಿರುತ್ತಾರೆ. ಊಟದ ಚಾರ್ಟನ್ನು ಮಕ್ಕಳು ಊಟ ಮಾಡುವ ಕೊಠಡಿಯಲ್ಲಿ ಹಾಕಬೇಕೆಂದು ಕೋರಿದರು. | ಸಭೆಯಲ್ಲಿ ಚರ್ಚಿಸಿದಂತೆ, ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ, ಹಾಸನ ಇವರು ಕೋರಿರುವಂತೆ, ಕಛೇರಿ ನಿರ್ವಹಣೆಗೆ ಅವಶ್ಯ ಅನುದಾನ ವನ್ನು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ನಿರ್ವಹಣೆಗೆ ನಿಗದಿಪಡಿಸಿರುವ ಅನುದಾನದಲ್ಲಿ ಭರಿಸಲು ಸಭೆಯು ಸರ್ವಾನುಮತದಿಂದ ಅನುಮತಿ ನೀಡಿತು. |

| | | | |
|---|---|---|---|
| | | ಉಪ ಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಮಾನ್ಯ ಸಮಿತಿ ಅಧ್ಯಕ್ಷರು ಹಾಗೂ ಸದಸ್ಯರು ಪ್ರಸ್ತಾಪಿಸಿರುವ ವಿಷಯದ ಬಗ್ಗೆ ಗಮನ ಹರಿಸಿ ವಿದ್ಯಾರ್ಥಿನಿಲಯಗಳ ವಾರ್ಡನ್ ಗಳಿಗೆ ಸೂಕ್ತ ನಿರ್ದೇಶನ ನೀಡಲು ಕ್ರಮ ವಹಿಸಬೇಕೆಂದು ಮತ್ತು ವಿದ್ಯಾರ್ಥಿನಿಲಯಗಳಿಗೆ ನಿರಂತರವಾಗಿ ಭೇಟಿ ಪರಿಶೀಲನೆ ನಡೆಸಬೇಕೆಂದು ತಿಳಿಸಿದರು.<br>ಮುಂದುವರೆದು, ಸಮಾಜ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ಇಲಾಖೆಯ ಕಟ್ಟಡಗಳ ದುರಸ್ಥಿ ಕಾಮಗಾರಿಗಳಿಗೆ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಿಗೆ ಬಿಡುಗಡೆ ಮಾಡಲಾಗಿದೆ. ಕಟ್ಟಡಗಳ ದುರಸ್ಥಿ ಕಾಮಗಾರಿಗಳನ್ನು ಸಮರ್ಪಕವಾಗಿ ಅನುಷ್ಠಾನ ಮಾಡಬೇಕೆಂದು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಪರ್ವತಯ್ಯರವರು ಮಾತನಾಡುತ್ತಾ, ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಶಿಕ್ಷಕರುಗಳನ್ನು ನೇಮಕ ಮಾಡದೆ ಮಕ್ಕಳ ಪಾಠಪ್ರವಚನಗಳಿಗೆ ಬಹಳ ತೊಂದರೆಯಾಗಿರುತ್ತದೆ. ಆದ್ದರಿಂದ, ಶಿಕ್ಷಕರುಗಳನ್ನು ನೇಮಕ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಸಮಿತಿ ಅಧ್ಯಕ್ಷರು ಮಾತನಾಡುತ್ತಾ, ಕೆಲವು ಶಾಲೆಗಳಲ್ಲಿ ವಿದ್ಯಾರ್ಥಿವೇತನವನ್ನು ದುರುಪಯೋಗ ಮಾಡಿಕೊಂಡಿರುವ ಬಗ್ಗೆ ಆರೋಪಗಳು ಕೇಳಿಬರುತ್ತಿವೆ. ಆದ್ದರಿಂದ, ಈ ಬಗ್ಗೆ ಪರಿಶೀಲಿಸಿ ಅಗತ್ಯ ಕ್ರಮ ವಹಿಸಬೇಕೆಂದು ತಿಳಿಸಿದರು.<br>ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರು ಉತ್ತರಿಸುತ್ತಾ, ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನದಡಿಯಲ್ಲಿ ಹೆಣ್ಣುಮಕ್ಕಳಿಗೆ ಪ್ರೋತ್ಸಾಹಧನ ಮತ್ತು ವಿದ್ಯಾರ್ಥಿವೇತನವನ್ನು ನೀಡಲಾಗುತ್ತಿದ್ದು, ಶಿಕ್ಷಕರು ಬಾಲಕಿಯರಿಗೆ ಕೇವಲ ವಿದ್ಯಾರ್ಥಿವೇತನವನ್ನು ನೀಡಿ ಪ್ರೋತ್ಸಾಹಧನ ನೀಡದೆ ಇರುವುದು ಕಂಡುಬಂದಿರುತ್ತದೆ. ಈ ಬಗ್ಗೆ ಶಿಕ್ಷಕರಿಗೆ ನೋಟೀಸು ಜಾರಿ ಮಾಡಲಾಗಿದೆ ಎಂದು ವಿವರ ನೀಡಿದರು.<br>ಉಪ ಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಕಾಲೇಜು ಪುಸ್ತಕ ಭಂಡಾರ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ/ವರ್ಗಗಳ ವಿದ್ಯಾರ್ಥಿಗಳ ಉಪಯೋಗಕ್ಕೆ ನೀಡಲಾಗುತ್ತಿದೆಯೇ? ಎಂಬ ಬಗ್ಗೆ ಪರಿಶೀಲನೆ ನಡೆಸಬೇಕೆಂದು ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರಿಗೆ ತಿಳಿಸಿದರು. | |

ಉಪ ಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ತಾಲ್ಲೂಕು ಪಂಚಾಯಿತಿ ಕಾರ್ಯಕ್ರಮಗಳಾದ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯ ಮೂಲಭೂತ ಸೌಕರ್ಯ ಯೋಜನೆಯಡಿಯಲ್ಲಿ ತಾಲ್ಲೂಕುಗಳಿಂದ ಕ್ರಿಯಾ ಯೋಜನೆಯನ್ನು ಅನುಮೋದಿಸಿ ಜಿಲ್ಲಾ ಪಂಚಾಯಿತಿಗೆ ಕಳುಹಿಸಲು ಕಾರ್ಯನಿರ್ವಾಹಕ ಅಧಿಕಾರಿಯವರು ಆದ್ಯತೆ ಮೇಲೆ ಕ್ರಮ ವಹಿಸಬೇಕೆಂದು ತಿಳಿಸಿದರು

ವೈಯಕ್ತಿಕ ಸಹಾಯ ಯೋಜನೆಯಡಿಯಲ್ಲಿ ಅನುದಾನ ಬಿಡುಗಡೆಯಾಗಿದ್ದು, ಫಲಾನುಭವಿಗಳ ಪಟ್ಟಿಗೆ ತಾಲ್ಲೂಕು ಪಂಚಾಯಿತಿಗಳಿಂದ ಅನುಮೋದನೆ ನೀಡಿ ಜಿಲ್ಲಾ ಪಂಚಾಯಿತಿಗೆ ಕಳುಹಿಸಲು ಮತ್ತು ಸಂಬಂಧಪಟ್ಟ ಇಲಾಖೆಗಳಿಗೆ ಕಳುಹಿಸಲು ಕ್ರಮ ವಹಿಸಬೇಕೆಂದು ತಿಳಿಸಿದರು.

ಮಾನ್ಯ ಸಮಿತಿ ಅಧ್ಯಕ್ಷರು ಜಿಲ್ಲಾ ಜಲಾನಯನ ಅಭಿವೃದ್ಧಿ ಇಲಾಖೆಯ ವತಿಯಿಂದ ವಿಶೇಷ ಘಟಕ ಯೋಜನೆ / ಗಿರಿಜನ ಉಪಯೋಜನೆಯಡಿ ಅನುಷ್ಠಾನ ಮಾಡಿರುವ ಕಾಮಗಾರಿಗಳ ಪಟ್ಟಿಯನ್ನು ನೀಡಬೇಕೆಂದು ಜಲಾನಯನ ಅಭಿವೃದ್ಧಿ ಅಧಿಕಾರಿಯವರಿಗೆ ತಿಳಿಸಿದರು.

ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ, ಹಾಸನ ಇವರು ಮಾತನಾಡುತ್ತಾ, ಕಳೆದ ಸಾಲಿನಲ್ಲಿಯೂ ಕಛೇರಿ ನಿರ್ವಹಣೆ ವೆಚ್ಚಕ್ಕೆ ಅನುದಾನ ಬಿಡುಗಡೆ ಮಾಡದಿರುವುರಿಂದ, ಕಛೇರಿ ಕಟ್ಟಡದ ಬಾಡಿಗೆಯನ್ನು ಪಾವತಿಸಿರುವುದಿಲ್ಲ ಮತ್ತು ಇಂಧನ ವೆಚ್ಚವನ್ನೂ ಭರಿಸಲು ಸಾಧ್ಯವಾಗಿರುವುದಿಲ್ಲ. ಇದರಿಂದ, ಕಛೇರಿ ಕೆಲಸಗಳನ್ನು ನಿರ್ವಹಿಸಲು ತೊಂದರೆಯಾಗಿರುತ್ತದೆ. ಆದ್ದರಿಂದ, ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ನಿರ್ವಹಣೆಗೆ ನಿಗದಿಪಡಿಸಿರುವ ಅನುದಾನದಲ್ಲಿ ಹಣ ಉಳಿಯುವುದರಿಂದ, ಸದರಿ ಲೆಕ್ಕಶೀರ್ಷಿಕೆಯಲ್ಲಿ ಕಛೇರಿ ನಿರ್ವಹಣೆಗೆ ಅವಶ್ಯವಿರುವ ಅನುದಾನವನ್ನು ವಿನಿಯೋಗಿಸಲು ಅನುಮೋದನೆ ನೀಡಬೇಕೆಂದು ಕೋರಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಅಂಗನವಾಡಿ ಮಕ್ಕಳಿಗೆ ನೀಡುತ್ತಿರುವ ಆಹಾರ ಪದಾರ್ಥದ ಗುಣಮಟ್ಟ ಉತ್ತಮವಾಗಿಲ್ಲದಿರುವ ಬಗ್ಗೆ ಸರ್ಕಾರಕ್ಕೆ ಈ ಬಗ್ಗೆ ಈಗಾಗಲೇ ಪತ್ರ ಬರೆಯಲಾಗಿದೆ ಎಂದು ಉಪ ನಿರ್ದೇಶಕರು ವಿವರ ನೀಡಿದರು.

ಅಂಗನವಾಡಿ ಕಾರ್ಯಕರ್ತೆಯರು ಆಹಾರ ಪದಾರ್ಥಗಳನ್ನು ತಮ್ಮ ಮನೆಯಲ್ಲಿಯೇ ಇಟ್ಟುಕೊಂಡು ವಿತರಣೆ ಮಾಡುತ್ತಿದ್ದಾರೆ. ಇದರಿಂದ, ಗರ್ಭಿಣಿ ಮತ್ತು ಬಾಣಂತಿಯರಿಗೆ ಅಂಗನವಾಡಿ ಕಾರ್ಯಕರ್ತೆಯರ ಮನೆಗೆ ಹೋಗಿ ತರಲು ಮುಜುಗರವಾಗುತ್ತದೆ. ಆದ್ದರಿಂದ, ಈ ಬಗ್ಗೆ ಅಂಗನವಾಡಿ ಕಾರ್ಯಕರ್ತೆಯರಿಗೆ ಇನ್ನು ಮುಂದೆ

| | | | |
|---|---|---|---|
| | | ಅಂಗನವಾಡಿ ಕೇಂದ್ರಗಳಲ್ಲಿಯೇ ಆಹಾರ ಪದಾರ್ಥಗಳನ್ನು ವಿತರಣೆ ಮಾಡಲು ಸೂಕ್ತ ನಿರ್ದೇಶನ ನೀಡಬೇಕೆಂದು ಮಾನ್ಯ ಸಮಿತಿ ಸದಸ್ಯರುಗಳು ತಿಳಿಸಿದರು.<br>ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀ ಹೆಚ್.ವೈ.ಚಂದ್ರಶೇಖರ್ ರವರು ಮಾತನಾಡುತ್ತಾ, ಡಾ: ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ವತಿಯಿಂದ ಗಂಗಾ ಕಲ್ಯಾಣ ಯೋಜನೆಗಳನ್ನು ಪೂರ್ಣಗೊಳಿಸಿರುವುದಿಲ್ಲ. ಈ ಬಗ್ಗೆ ಪರಿಶೀಲಿಸಿ ಕ್ರಮ ವಹಿಸಬೇಕೆಂದು ತಿಳಿಸಿದರು.<br>ಉಪ ಕಾರ್ಯದರ್ಶಿ(ಆಡಳಿತ) ರವರು ಮಾತನಾಡುತ್ತಾ, ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರುಗಳಿಗೆ ಕಳೆದ ಮೂರು ವರ್ಷಗಳಲ್ಲಿ ಅನುಷ್ಠಾನ ಮಾಡಿದ ಗಂಗಾ ಕಲ್ಯಾಣ ಯೋಜನೆಗಳ ತಾಲ್ಲೂಕುವಾರು ಪಟ್ಟಿಯನ್ನು ನೀಡಬೇಕೆಂದು ಜಿಲ್ಲಾ ವ್ಯವಸ್ಥಾಪಕರು, ಡಾ: ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಹಾಸನರವರಿಗೆ ತಿಳಿಸಿದರು.<br>ಮುಂದುವರೆದು, ಡಿ.ದೇವರಾಜು ಅರಸು ಅಭಿವೃದ್ಧಿ ನಿಗಮದ ವತಿಯಿಂದ ಅನುಷ್ಠಾನ ಮಾಡುವ ಚೈತನ್ಯ, ಶ್ರಮಶಕ್ತಿ ಯೋಜನೆಗಳಡಿಯಲ್ಲಿ ಸಾಲ ಮಂಜೂರು ಮಾಡಿರುವ ಫಲಾನುಭವಿಗಳಿಂದ ಸಾಲವನ್ನು ವಸೂಲು ಮಾಡಲು ಕ್ರಮ ವಹಿಸಬೇಕೆಂದು ಜಿಲ್ಲಾ ವ್ಯವಸ್ಥಾಪಕರಿಗೆ ತಿಳಿಸಿದರು.<br>ಮಾನ್ಯ ಸಮಿತಿ ಅಧ್ಯಕ್ಷರು ಮಾತನಾಡುತ್ತಾ, ಪರಿಶಿಷ್ಟ ಜಾತಿ/ವರ್ಗಗಳ ಕಾಲೋನಿಗಳಿಗೆ ಕುಡಿಯುವ ನೀರಿನ ಕಾಮಗಾರಿಗಳನ್ನು ಅನುಷ್ಠಾನ ಮಾಡಬೇಕೆಂದು ಕೋರಿದರು.<br>ಮೀನುಗಾರಿಕೆ ಇಲಾಖೆಯಡಿ ಮತ್ಸ್ಯಾಶ್ರಯ ಯೋಜನೆಯಡಿಯಲ್ಲಿ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಲು ಕ್ರಮ ವಹಿಸಬೇಕೆಂದು ಮತ್ತು ಬೇರೆ ಯೋಜನೆಯಡಿಯಲ್ಲಿ ವಸತಿಯನ್ನು ಪಡೆದಿರುವ ಬಗ್ಗೆ ಪರಿಶೀಲಿಸಬೇಕೆಂದು ಹಿರಿಯ ಸಹಾಯಕ ಮೀನುಗಾರಿಕಾ ನಿರ್ದೇಶಕರಿಗೆ ತಿಳಿಸಿದರು.<br>ಅರಣ್ಯ ಇಲಾಖೆಯ ವತಿಯಿಂದ ವಿಶೇಷ ಅಭಿವೃದ್ಧಿ ಯೋಜನೆಯಡಿಯಲ್ಲಿ ಯಾವ ಯೋಜನೆಗಳನ್ನು ಅನುಷ್ಠಾನ ಮಾಡಲಾಗುತ್ತಿದೆ ಎಂಬ ಬಗ್ಗೆ ಮಾನ್ಯ ಸದಸ್ಯರುಗಳಿಗೆ ಪಟ್ಟಿಯನ್ನು ನೀಡಬೇಕೆಂದು ತಿಳಿಸಿದರು<br>ಸಹಾಯಕ ನಿರ್ದೇಶಕರು ಸಾಮಾಜಿಕ ಅರಣ್ಯ ಇಲಾಖೆ, ಹಾಸನ ಇವರು ಉತ್ತರಿಸುತ್ತಾ, ವಿಶೇಷ ಅಭಿವೃದ್ಧಿ ಯೋಜನೆಯಡಿಯಲ್ಲಿ ನರ್ಸರಿಗಳನ್ನು ಮಾಡಲಾಗಿದ್ದು, ಪರಿಶಿಷ್ಟ ಜಾತಿ/ವರ್ಗಗಳ ಫಲಾನುಭವಿಗಳಿಗೆ ಸಸಿಗಳನ್ನು ನೀಡಲಾಗುತ್ತಿದೆ ಎಂದು ವಿವರ ನೀಡಿದರು. | |

| | | | |
|---|---|---|---|
| | | ಉಪ ಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಅರಣ್ಯ ಇಲಾಖೆಯ ವತಿಯಿಂದ ಬೆಳೆಸಿರುವ ಸಸಿಗಳನ್ನು ಫಲಾನುಭವಿಗಳಿಗೆ ವಿತರಣೆ ಮಾಡಲು ಕ್ರಮ ವಹಿಸಬೇಕೆಂದು ತಿಳಿಸಿದರು ಮತ್ತು ಶಾಲೆಗಳಿಗೆ ಫೆನ್ಸಿಂಗ್ ಮತ್ತು ರಕ್ಷಣಾ ಗೋಡೆಯನ್ನು ನಿರ್ಮಿಸಲು ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಅವಕಾಶವಿದ್ದು, ಈ ಬಗ್ಗೆ ಕ್ರಮ ವಹಿಸಬೇಕೆಂದು ತಿಳಿಸಿದರು. | |
| | | ವಂದನೆಗಳೊಂದಿಗೆ ಸಭೆಯಲ್ಲಿ ಮುಕ್ತಾಯಗೊಳಿಸಲಾಯಿತು. | |

(ಹೆಚ್.ವೈ.ಚಂದ್ರಶೇಖರ್)
ಅಧ್ಯಕ್ಷರು
ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ
ಜಿಲ್ಲಾ ಪಂಚಾಯಿತಿ, ಹಾಸನ.